ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 282 |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 14-09-2022 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

| ಕ್ರಮ ಸಂಖ್ಯೆ: | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಬೆಂಗಳೂರು - ಮೈಸೂರು ದಶಪಥ ರಸ್ತೆಯಲ್ಲಿ ಇತ್ತೀಚೆಗೆ ಬಿದ್ದ ಹೆಚ್ಚಿನ ಮಳೆಯಿಂದಾಗಿ ಅವೈಜ್ಞಾನಿಕ ಕಾಮಗಾರಿಯಿಂದ ಸಂಚಾರ ಸಂಪೂರ್ಣವಾಗಿ ರದ್ದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬೆಂಗಳೂರು-ಮೈಸೂರು (NH-275) ದಶಪಥ ರಸ್ತೆಯು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಇವರ ಸುಪರ್ದಿಯಲ್ಲಿರುತ್ತದೆ. ಸದರಿ ಹೆದ್ದಾರಿಯ ಕುರಿತು ಈ ಕೆಳಕಂಡಂತೆ ವರದಿಸಿರುತ್ತಾರೆ.<br>ಕಡಿಮೆ ಅವಧಿಯಲ್ಲಿ ನಿರಂತರವಾಗಿ ಅಧಿಕ ಮಳೆ (ಪ್ರಕೃತಿ ವಿಕೋಪ) ಸುರಿದ ಕಾರಣ ನೀರು ನಿಂತಿದ್ದು, ವಾಹನ ಸಂಚಾರಕ್ಕೆ ಅಡಚಣೆಯುಂಟಾಗಿದ್ದು, (ವಿಪತ್ತು ನಿರ್ವಹಣೆಯ ಅಂಕಿಅಂಶಗಳ ಪ್ರಕಾರ 82.8% ರಷ್ಟು ಅಧಿಕ ಮಳೆ ಉಂಟಾಗಿರುತ್ತದೆ.) ಅವೈಜ್ಞಾನಿಕ ಕಾಮಗಾರಿಗಳನ್ನು ಕೈಗೊಂಡಿರುವುದಿಲ್ಲ.<br>ಪರಿಹಾರ ಕ್ರಮವಾಗಿ ಹೆದ್ದಾರಿಯಲ್ಲಿ ನಿಂತ ನೀರನ್ನು ತೆರವುಗೊಳಿಸಿ, ವಾಹನ ಸಂಚಾರಕ್ಕೆ ಅನುವು ಮಾಡಿಕೊಡಲಾಗಿರುತ್ತದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |
| ಆ) | ಬಂದಿದ್ದಲ್ಲಿ, ಅವೈಜ್ಞಾನಿಕವಾಗಿ ಯಾವ ಯಾವ ಸ್ಥಳಗಳಲ್ಲಿ ಯಾವ ಪ್ರಮಾಣದಲ್ಲಿ ಕಾಮಗಾರಿ ನಿರ್ವಹಿಸಲಾಗಿದೆ: (ಪೂರ್ಣ ವಿವರ ನೀಡುವುದು) | |
| ಇ) | ಅವೈಜ್ಞಾನಿಕ ಕಾಮಗಾರಿಯನ್ನು ಸರಿಪಡಿಸಲು ಹೆಚ್ಚುವರಿಯಾಗಿ ಹೊಸದಾಗಿ ರೂಪಿಸಿರುವ ಯೋಜನೆಗಳೇನು; (ವಿವರ ನೀಡುವುದು) | ರಾಷ್ಟ್ರೀಯ ಹೆದ್ದಾರಿ-275ರ ಅಭಿವೃದ್ಧಿಗಾಗಿ ತಯಾರಿಸಲಾದ ವಿಸ್ತೃತ ಯೋಜನಾ ವರದಿ, ಸಂಬಂಧಿಸಿದ ಐ.ಆರ್.ಸಿ. ಕೋಡ್ ಮತ್ತು ಕೇಂದ್ರ ಭೂಸಾರಿಗೆ ಮಂತ್ರಾಲಯದ ಮಾರ್ಗಸೂಚಿ ಮತ್ತು ಮಾನದಂಡಗಳನ್ನಾಧರಿಸಿ ಮತ್ತು ಅಸ್ತಿತ್ವದಲ್ಲಿರುವ ಜಲಮಾರ್ಗಗಳನ್ನು ಮತ್ತು ಒಳಚರಂಡಿಗಳನ್ನು ಪರಿಗಣಿಸಿ, ಎಲ್ಲಾ ವಿಧದ ಒಳಚರಂಡಿಗಳ ನಿರ್ಮಾಣಕ್ಕಾಗಿ ಯೋಜನೆಯಲ್ಲಿ ಪ್ರಾವದಾನ ಮಾಡಲಾಗಿರುತ್ತದೆ. ಆದಕಾರಣ ಅವೈಜ್ಞಾನಿಕ ಕಾಮಗಾರಿ ಕೈಗೊಂಡಿರುವುದಿಲ್ಲ.<br>ಗುತ್ತಿಗೆ ಕರಾರಿನಂತೆ ಕಾಮಗಾರಿಯು ನಡೆಯುತ್ತಿರುವ ಕುರಿತು ಮೇಲ್ವಿಚಾರಣೆ ನಡೆಸಲು ನೇಮಕಗೊಂಡಿರುವ ಸ್ವತಂತ್ರ ಅಭಿಯಂತರರು ಮತ್ತು ಒಳಚರಂಡಿ ತಜ್ಞರು ನಿರಂತರವಾಗಿ ಕಾಮಗಾರಿಯ ಪ್ರಗತಿಯ ಕುರಿತು ಮೇಲ್ವಿಚಾರಣೆ/ಉಸ್ತುವಾರಿ ನಡೆಸುತ್ತಿರುತ್ತಾರೆ.<br>ಪ್ರಸ್ತುತ ಕಾಮಗಾರಿಯು ಒಳಚರಂಡಿ ಒಳಗೊಂಡಂತೆ ಪ್ರಗತಿಯಲ್ಲಿದ್ದು ಕಾಮಗಾರಿಯು ಪೂರ್ಣಗೊಂಡ ನಂತರ ಯಾವುದೇ ಅಡೆತಡೆಯಿಲ್ಲದೆ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗುತ್ತದೆ. ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |
| ಈ) | ಇದಕ್ಕೆ ತಗಲುವ ಹೆಚ್ಚುವರಿ ಅಂದಾಜು ಮೊತ್ತವೆಷ್ಟು: | |
| ಉ) | ಸದರಿ ಅವೈಜ್ಞಾನಿಕ ಕಾಮಗಾರಿ ನಿರ್ವಹಿಸಿದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು: | |

| | | |
|---|---|---|
| ಊ) | ರಸ್ತೆ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು? | ಬೆಂಗಳೂರು-ನಿಡಘಟ್ಟ ವಿಭಾಗದ ಅಭಿವೃದ್ಧಿ ಕಾಮಗಾರಿಯನ್ನು ಅಕ್ಟೋಬರ್-2022 ರೊಳಗೆ ಮತ್ತು ನಿಡಘಟ್ಟ-ಮೈಸೂರು ವಿಭಾಗದ ಅಭಿವೃದ್ಧಿ ಕಾಮಗಾರಿಯನ್ನು ಡಿಸೆಂಬರ್-2022 ರೊಳಗೆ ಪೂರ್ಣಗೊಳಿಸಲಾಗುವುದೆಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |

ಕಡತ ಸಂಖ್ಯೆ: ಲೋಇ 305 ಸಿಎನ್‌ಹೆಚ್ 2022 (ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು